ತರೀಕೇರೆ ತಾಲ್ಲೂಕಿನಲ್ಲಿರುವ ವಿದ್ಯುತ್ ಮಂಡಳಿಯಂ ಉಪಕೇಂದ್ರಗಳ ಬಗ್ಗೆ.

ಶ್ರೀ. ಶ್ರೀ ಬಿ. ಆರ್. ನೀಲಕಂಠಪ್ಪ (ತರೀಕೆರೆ) – ಮಾನ್ಯ ಕೈಗಾರಿಕಾ ಮತ್ತು ವಿದ್ಯುತ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತರೀಕೆರೆ ತಾಲ್ಲೂಕಿನಲ್ಲಿರುವ ವಿದ್ಯುತ್ ಉಪ ಕೇಂದ್ರಗಳ ಸಂಖ್ಯೆ ಎಷ್ಟು ?

ಆ) ಲಕ್ಕವಳ್ಳಿ ಮತ್ತು ಕಂಡ್ಲೂರಿನಲ್ಲಿ ಉಪಕೇಂದ್ರವನ್ನು ತೆರೆಯುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರದವರಿಂ ಕೈಗೊಂಡ ಕ್ರಮವೇನು ?

ಶ್ರೀ ಜೆ. ಹೆಚ್. ಪಟೇಲ್ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳಂ ಹಾಗೂ ವಿದ್ಯುಚ್ಛಕ್ತಿ ಮಂತ್ರಿಗಳು).—

ಅ) ತರೀಕೆರೆ ತಾಲ್ಲೂಕಿಗೆ ಸಂಬಂದಿಸಂವ ಮಂಡಳಿಯ ತರೀಕೆರೆ ಉಪ ವಿಭಾಗದಲ್ಲಿ ಆರು ಸೆಕ್ಷನ್‌ಗಳಿವೆ.

ಆ) ಬಂದಿದೆ.

ಇ) ಆರ್ಥಿಕ ಪರಿಸ್ಥಿತಿಯಂನಾ ಧರಿಸಿ ಹೊಸ ಸೆಕ್ಷನ್‌ಗಳನ್ನು ತೆರೆಯಲು ನಿರ್ಧರಿಸಿದಾಗ ಇವುಗಳನ್ನು ಪರಿಶೀಲಿಸಲಾಗುವುದಂ.

ಪ್ರಕಟಣೆ

ಅಧ್ಯಕ್ಷರು.—ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿದೆ.

"ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ ೧೧ಳರ ಮೇರೆಗೆ, ವಿಧಾನ ಸಭೆಯಿಂದ ಅಂಗೀಕಾರವಾದ ಈ ಕೆಳಕಂಡ ವಿಧೇಯಕವನ್ನು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ೯–೯–೧೯೮೭ರಂದು ಅನುಮೋದಿಸಲಾಯಿತೆಂದು ತಿಳಿಸುತ್ತೇನೆ.

ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, ೧೯೮೭."

ನಿಲುವಳಿ ಸೂಚನೆಗೆ ಅನುಮತಿ ಕೋರಿಕೆ

ಅಪ್ಪರ್ ಭದ್ರಾ ಯೋಜನೆಯನ್ನು ಮುಗಿಸದೇ ಇರುವುದರಿಂದ ತುಮಕೂರು, ಚಿತ್ರದುರ್ಗ, ಬಳ್ಳಾರಿ ಹಾಗೂ ಕೋಲಾರ ಜಿಲ್ಲೆಯ ರೈತರಿಗೆ ಆಗಿರುವ ತೊಂದರೆ ಬಗ್ಗೆ

ಶ್ರೀ ಬಿ. ಲಕ್ಕಪ್ಪ.—ಮಾನ್ಯ ಸಭಾಪತಿಯವರೆ, ತುಮಕೂರು, ಚಿತ್ರದುರ್ಗ, ಬಳ್ಳಾರಿ ಹಾಗೂ ಕೋಲಾರ ಜಿಲ್ಲೆಗಳ ಎಲ್ಲಾ ಶಾಸಕರುಗಳು ಪಕ್ಷ ಭೇದವಿಲ್ಲದೆ, ಪ್ರತಿ ವರ್ಷವೂ ಪ್ರಾಯಂ ಆಗಿ ಬರಗಾಲಕ್ಕೆ ಒಳಗಾಗುವಂಥ ಈ ಪ್ರದೇಶಗಳಲ್ಲಿ ನೀರಾವರಿ ಯೋಜನೆಗಳನ್ನು ಅತ್ಯವಶ್ಯಕವಾಗಿ ಕೈಗೊಳ್ಳಬೇಕೆಂದು ಮಾನ್ಯ ಮುಖ್ಯಮಂತ್ರಿಗಳಿಗೂ ಹಾಗೂ ಸರ್ಕಾರಕ್ಕೂ ಅನೇಕ ಬಾರಿ ಮನವಿಗಳನ್ನು ಕೊಟ್ಟರೂ, ಆದು ಈಡೇರದ ಪ್ರಯುಕ್ತ ಇಂದು ನಿಲುವಳಿ ಸೂಚನೆಯನ್ನು ತಂದಿದ್ದೇವೆ. ಈ ಭಾಗಗಳ ಒಂದು ಕೋಟಿ ಜನರು ಇವರು ಬಹಳ ಕಷ್ಟಕ್ಕೆ ಗುರಿಯಾಗಿದ್ದಾರೆ. ಇದರ ಬಗ್ಗೆ ಚರ್ಚೆ ಮಾಡಲು ತಾವು ಅವಕಾಶ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಇದು ಬಹಳ ಮಹತ್ವದ ವಿಷಯವಾಗಿದೆ. ಇದನ್ನು ೬೮ರ ಪ್ರಕಾರ ಚರ್ಚೆಗೆ ತೆಗೆದುಕೊಳ್ಳುವುದಕ್ಕೆ ಅವಕಾಶ ಮಾಡಿಕೊಡುತ್ತೇನೆ. ಸಾಧ್ಯವಾದರೆ, ಇವತ್ತು ತೆಗೆದುಕೊಳ್ಳೋಣ, ಇಲ್ಲದಿದ್ದರೆ ನಾಳೆ ತೆಗೆದುಕೊಳ್ಳೋಣ.